ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೧೧ನೇ ಫೆಬ್ರವರಿ, ೨೦೧೭**

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ವಸತಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೭. ಸಾರಿಗೆ ಸಚಿವರು

೮. ಗಣಿ ಮತ್ತು ಭೂವಿಜ್ಞಾನ ಸಚಿವರು

---

## ಅನುಕಂಪದ ಆಧಾರದ ನೇಮಕಾತಿ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)–**

೪೬ (೪೩೬) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪದ ಆಧಾರದ ಮೇಲಿನ ನೇಮಕಾತಿಗಳನ್ನು ಯಾವ ದಿನಾಂಕದಿಂದ ಸ್ಥಗಿತಗೊಳಿಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಆ) ಈ ರೀತಿ ಕಳೆದ ೧೭ ವರ್ಷಗಳಿಂದ ಸ್ಥಗಿತಗೊಳಿಸಲು ಕಾರಣಗಳೇನು ;

(ಇ) ಇದರಿಂದ ಮೃತ ನೌಕರನ ಕುಟುಂಬಕ್ಕೆ ಸರ್ಕಾರವೇ ಅನ್ಯಾಯ ಮಾಡಿದಂತಾಗುವುದಿಲ್ಲವೆ ;

(ಈ) ಸ್ಥಗಿತ ನಿರ್ಬಂಧವನ್ನು ಯಾವಾಗ ರದ್ದುಗೊಳಿಸಿ ಮೃತ ನೌಕರನ ಕುಟುಂಬಕ್ಕೆ ನ್ಯಾಯ ಒದಗಿಸಲಾಗುವುದು ?

## ಹುಬ್ಬಳ್ಳಿ ನಗರದ ವಾರ್ಡ್ ನಂ. ೫೩ರ ಪ್ರದೇಶವನ್ನು ಕೊಳಚೆ ಪ್ರದೇಶವೆಂದು ಘೋಷಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೪೭ (೪೫೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ಜಿಲ್ಲೆಯ ಹುಬ್ಬಳ್ಳಿ ನಗರದ ವಾರ್ಡ್ ಸಂಖ್ಯೆ ೫೩ರಲ್ಲಿರುವ ಜಿ.ಅಡ್ಡಾ (ಗುರುಸಿದ್ದೇಶ್ವರ ನಗರ) ಮೂರು ಸಾವಿರ ಮಠದ ಹಿಂಭಾಗ, ಈ ಪ್ರದೇಶವನ್ನು ಕೊಳಚೆ ಪ್ರದೇಶವೆಂದು (SLUM) ಘೋಷಿಸಲಾಗಿದೆಯೇ ;

(ಆ) ಘೋಷಣೆ ಆಗಿದ್ದಲ್ಲಿ, ಅಲ್ಲಿಯ ನಿವಾಸಿಗಳಿಗೆ "ಪರಿಚಯ ಪತ್ರ" ಒದಗಿಸಲಾಗಿದೆಯೇ ; ಒದಗಿಸದಿದ್ದಲ್ಲಿ, ಕಾರಣಗಳೇನು ; ಒದಗಿಸಲು ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ವಿಶ್ವವಿದ್ಯಾಲಯದಿಂದ ನೀಡುವ ಚಿನ್ನದ ಪದಕಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೪೮ (೩೬೧) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯದಿಂದ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಯಾವ ಯಾವ ವಿಭಾಗದಲ್ಲಿ ಎಷ್ಟು ಚಿನ್ನದ ಪದಕವನ್ನು ನೀಡಲಾಗುತ್ತದೆ ; ಚಿನ್ನದ ಪದಕ ನೀಡಲು ಇರುವ ಮಾನದಂಡಗಳೇನು ;

(ಆ) ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಸರ್ಕಾರ ನೀಡುವ ಚಿನ್ನದ ಪದಕದಲ್ಲಿನ ಚಿನ್ನದ ಪ್ರಮಾಣವೆಷ್ಟು ; ಪದಕದೊಂದಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತದೆಯೇ ;

(ಇ) ಚಿನ್ನದ ಪದಕಕ್ಕಾಗಿ ವಿದ್ಯಾರ್ಥಿಗಳಿಂದ ಶುಲ್ಕವನ್ನು ಸಂಗ್ರಹ ಮಾಡಲಾಗುತ್ತದೆಯೇ ಅಥವಾ ವಿಶ್ವವಿದ್ಯಾಲಯದ ವತಿಯಿಂದಲೇ ನೀಡಲಾಗುತ್ತದೆಯೇ ?

## ಕುಮಾರ ನಾಯಕ್ ವರದಿ ಜಾರಿ ಹಾಗೂ ವಿಶೇಷ ವೇತನ ಬಡ್ತಿ ಕುರಿತು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೪೯ (೩೭೫+೪೦೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರು, ಪ್ರಾಂಶುಪಾಲರು ಹಾಗೂ ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯ ಶಿಕ್ಷಕರ ವೇತನ ತಾರತಮ್ಯದ ಬಗ್ಗೆ ಕುಮಾರ್ ನಾಯಕ್ ನೇತೃತ್ವದಲ್ಲಿ ಸಮಿತಿಯನ್ನು ಯಾವಾಗ ರಚಿಸಲಾಯಿತು ;

(ಆ) ಸದರಿ ಸಮಿತಿಯು ಯಾವಾಗ ವರದಿಯನ್ನು ಸಲ್ಲಿಸಿದೆ ; ಸಲ್ಲಿಸಿದ್ದಲ್ಲಿ, ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಶಿಕ್ಷಕರು/ ಉಪನ್ಯಾಸಕರುಗಳು ಕುಮಾರ್ ನಾಯಕ್ ವರದಿ ಜಾರಿಗೊಳಿಸುವ ನಿಟ್ಟಿನಲ್ಲಿ ಹೋರಾಟ ಕೈಗೊಂಡ ಸಂದರ್ಭದಲ್ಲಿ ಸರ್ಕಾರವು ಒಂದು ವೇತನ ಬಡ್ತಿ ನೀಡುವುದಾಗಿ ಘೋಷಣೆ ಮಾಡಿದ್ದು, ಅದು ದೊರಕದೆ ವೇತನ ಬಡ್ತಿಯಿಂದ ವಂಚಿತರಾಗಿರುವ ಶಿಕ್ಷಕ ವೃಂದ ಹಾಗೂ ತತ್ಸಮಾನ ವೃಂದದ ಶಿಕ್ಷಕರ ವಿವರ ನೀಡುವುದು ;

(ಈ) ಅವರಿಗೂ ಕೂಡ ಈ ವೇತನ ಬಡ್ತಿಯನ್ನು ನೀಡುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು ; ವೇತನ ಬಡ್ತಿಯನ್ನು ಜಾರಿಗೊಳಿಸಲು ವಿಧಿಸಿಕೊಂಡಿರುವ ಕಾಲಮಿತಿ ಏನು ; ಈ ವಿಷಯಕ್ಕೆ ಸಂಬಂಧಿಸಿದಂತೆ ಚಾಲ್ತಿಯಲ್ಲಿರುವ ಕಡತಗಳ ವಿವರ ನೀಡುವುದು ;

(ಉ) ಕುಮಾರ್ ನಾಯಕ್ ವರದಿಯ ಜಾರಿ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ? (ಕುಮಾರ್ ನಾಯಕ್ ವರದಿಯ ಪ್ರತಿಯನ್ನು ನೀಡುವುದು)

## ಕಂಪ್ಯೂಟರ್ ಖರೀದಿ ಹಗರಣದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)–**

೫೦ (೪೬೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ನೇ ಸಾಲಿನಲ್ಲಿ ವಿಶ್ವಬ್ಯಾಂಕ್ ಧನ ಸಹಾಯದಿಂದ ಗ್ರಾಮ ಸ್ವರಾಜ್ ಯೋಜನೆಯಡಿ ರಾಜ್ಯದ ೧೭೬ ತಾಲ್ಲೂಕುಗಳಿಗೆ ಒಟ್ಟು ಎಷ್ಟು ಕಂಪ್ಯೂಟರ್ ಖರೀದಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮೇಲ್ಕಂಡ ಯೋಜನೆಯಲ್ಲಿ ಯಾವ ಕಂಪನಿಗೆ ಟೆಂಡರ್ ನೀಡಲಾಗಿತ್ತು ;

(ಇ) ಕಂಪ್ಯೂಟರ್ ಖರೀದಿಯಲ್ಲಿ ಅವ್ಯವಹಾರವಾದ ಬಗ್ಗೆ ತನಿಖೆ ನಡೆಸಿರುವ ಜಿ.ಕೆ. ಅರೋರಾ ಸಮಿತಿ ಸರ್ಕಾರಕ್ಕೆ ಸಂಕ್ಷಿಪ್ತ ವರದಿ ನೀಡಿರುತ್ತದೆಯೇ ; (ವರದಿ ನೀಡಿದ್ದಲ್ಲಿ, ವಿವರ ನೀಡುವುದು)

(ಈ) ಕಂಪ್ಯೂಟರ್ ಗುಣಮಟ್ಟ ಪರಿಶೀಲನೆಗೆ ಇರುವ ಮಾನದಂಡವೇನು ;

(ಉ) ಈ ಪ್ರಕರಣದಲ್ಲಿ ಇಲಾಖೆಯ ಕೆಲ ಉನ್ನತ ಅಧಿಕಾರಿಗಳು ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೫೧ (೩೯೫+೩೯೦) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಈ ವಿಶ್ವವಿದ್ಯಾಲಯಗಳಿಗೆ ಕಳೆದ ೩ ವರ್ಷಗಳಲ್ಲಿ ನೀಡಿರುವ ಅನುದಾನದ ಮೊತ್ತವೆಷ್ಟು ; (ವಿಶ್ವವಿದ್ಯಾಲಯಗಳವಾರು ವಿವರಗಳನ್ನು ನೀಡುವುದು)

(ಇ) ರಾಜ್ಯದ ವಿಶ್ವ ವಿದ್ಯಾನಿಲಯಗಳಲ್ಲಿ ಕೋಟ್ಯಾಂತರ ರೂಪಾಯಿಗಳ ಬೃಹತ್ ಹಗರಣ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಯಾವ ವಿಶ್ವ ವಿದ್ಯಾನಿಲಯಗಳಲ್ಲಿ, ಎಷ್ಟು ಪ್ರಮಾಣದ ಹಣ ದುರುಪಯೋಗದ ಹಗರಣ ನಡೆದಿದೆ ; (ವಿವರ ನೀಡುವುದು)

(ಉ) ತಪ್ಪಿತಸ್ಥರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ ; ವಿಶ್ವ ವಿದ್ಯಾನಿಲಯಗಳ ಸುಧಾರಣೆಯಲ್ಲಿ ಸರ್ಕಾರ ಏನು ಕ್ರಮ ವಹಿಸುವುದು ;

(ಊ) ವಿಶ್ವ ವಿದ್ಯಾಲಯದಲ್ಲಿ ಸೇವೆ ಸಲ್ಲಿಸಿದ ಪ್ರಾಧ್ಯಾಪಕರನ್ನು ಅದೇ ವಿಶ್ವವಿದ್ಯಾಲಯದ ಕುಲಸಚಿವರಾಗಿ ನೇಮಕ ಮಾಡಬಾರದೆಂಬ ಉನ್ನತ ಶಿಕ್ಷಣ ಪರಿಷತ್‌ನ ಆಶಯಕ್ಕೆ ತಿಲಾಂಜಲಿ ಇಟ್ಟು, ಕುವೆಂಪು ವಿಶ್ವವಿದ್ಯಾಲಯಕ್ಕೆ ಕುಲಸಚಿವರಾಗಿ ನೇಮಿಸಿರುವುದು ಸರಿಯೇ ;

(ಋ) ವಿಶ್ವವಿದ್ಯಾಲಯಗಳಲ್ಲಿ ಕುಲಸಚಿವರಾಗಿ ನೇಮಿಸಲು ಸರ್ಕಾರ ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ ? (ವಿವರ ನೀಡುವುದು)

**ಶಿಕ್ಷಕರ ವೇತನಕ್ಕೆ ಸಂಬಂಧಿಸಿದ ಆದೇಶ ಹಿಂಪಡೆಯದಂತೆ ಸರ್ಕಾರ ಕ್ರಮ ಕೈಗೊಳ್ಳುವ ಬಗ್ಗೆ**

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೫೨ (೪೪೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಾಥಮಿಕ ಶಾಲಾ ತರಬೇತಿ ಹೊಂದದ ಶಿಕ್ಷಕರಿಗೆ ತರಬೇತಿ ಹೊಂದಿದ ಶಿಕ್ಷಕರ ವೇತನಕ್ಕೆ ಸಮನಾಗಿ ವೇತನವನ್ನು ನಿಗಧಿಪಡಿಸಿ ದಿನಾಂಕ: ೨೦.೧೧.೨೦೧೧ ಮತ್ತು ದಿನಾಂಕ: ೦೪.೦೭.೨೦೧೪ರಲ್ಲಿ ಆದೇಶ ಹೊರಡಿಸಿರುವುದು ನಿಜವೇ ;

(ಆ) ಈ ಆದೇಶವನ್ನು ಅನುಷ್ಠಾನಗೊಳಿಸಿ ವೇತನವನ್ನು ನಿಗದಿಪಡಿಸಿದ ಮೇಲೆ ಇದ್ದಕ್ಕಿದ್ದ ಹಾಗೆ ದಿನಾಂಕ: ೧೬.೦೮.೨೦೧೬ರ ಶಿಕ್ಷಣ ಇಲಾಖೆಯ ಪತ್ರದಲ್ಲಿ ಮೇಲ್ಕಂಡ ಆದೇಶವನ್ನು ಹಿಂತೆಗೆದುಕೊಂಡಿರುವುದರಿಂದ, ೯೦೦ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ ;

(ಇ) ಸುಮಾರು ೨೦ ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸಿ, ನಿವೃತ್ತಿ ಹೊಂದಿರುವ ಮತ್ತು ನಿವೃತ್ತಿ ಅಂಚಿನಲ್ಲಿರುವ ತರಬೇತಿ ಹೊಂದದ ಶಿಕ್ಷಕರುಗಳಿಗೆ ಆದೇಶವನ್ನು ಹಿಂಪಡೆಯುವುದರಿಂದ ಅನ್ಯಾಯವಾಗುವುದರಿಂದ ಹಿಂಪಡೆಯದಂತೆ ಸರ್ಕಾರ ಕ್ರಮ ಕೈಗೊಳ್ಳುವುದೆ ?

**ಹುಡ್ಕೋದಿಂದ ಪಡೆದ ಸಾಲವನ್ನು ಮನ್ನಾಗೊಳಿಸಿದ ಬಗ್ಗೆ**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೫೩ (೩೨೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹುಡ್ಕೋದಿಂದ ಸಾಲವನ್ನು ಪಡೆದು ವಸತಿ ರಹಿತರಿಗೆ ವಸತಿ ನೀಡಿದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ವರ್ಷಾವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಆ) ಸರ್ಕಾರದ ಸಾಲ ಮತ್ತು ಬಡ್ಡಿ ಮನ್ನಾ ಯೋಜನೆಯಡಿ ಈ ಮನೆಗಳ ಮೇಲಿನ ಸಾಲ ಮತ್ತು ಬಡ್ಡಿ ಮನ್ನಾ ಮಾಡಲಾಗಿದೆಯೇ; ಹೌದಾದರೆ, ಫಲಾನುಭವಿಗಳಿಗೆ ಈ ಬಗ್ಗೆ ತಿಳುವಳಿಕೆ ಪತ್ರ ನೀಡಲಾಗಿದೆಯೇ; ಇಲ್ಲವಾದರೆ, ಸಾಲ ಮತ್ತು ಬಡ್ಡಿ ಮನ್ನಾ ಮಾಡುವ ಬಗ್ಗೆ ಸರ್ಕಾರದ ನಿಲುವೇನು;

(ಇ) ರಾಜೀವಗಾಂಧಿ ವಸತಿ ನಿಗಮ ನಿಯಮಿತ ಅಸ್ತಿತ್ವಕ್ಕೆ ಬರುವ ಮೊದಲು ರಾಜ್ಯದಲ್ಲಿ ಹುಡ್ಕೋ ಮತ್ತು ಬೇರೆ ಮೂಲದಿಂದ ಸಾಲ ಪಡೆದು ನಿರ್ಮಿಸಿದ ಮನೆಗಳ ಸಂಖ್ಯೆ ಎಷ್ಟು; ಅವುಗಳಿಗೆ ಸಾಲ ಮತ್ತು ಬಡ್ಡಿ ಮನ್ನಾ ಮಾಡಲಾಗಿದೆಯೇ; ಇಲ್ಲವಾದಲ್ಲಿ, ಕಾರಣವೇನು? (ಆದೇಶದ ಪ್ರತಿ ಒದಗಿಸುವುದು)

## ಲೆಕ್ಕ ಪರಿಶೋಧನೆಗಾಗಿ ವೆಚ್ಚ ಮಾಡಿರುವ ಹಣದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೫೪ (೩೯೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಇಲಾಖೆಯಲ್ಲಿ ಲೆಕ್ಕ ಪರಿಶೋಧನೆಗಾಗಿ ವೆಚ್ಚ ಮಾಡಿರುವ ಹಣವೆಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಲೆಕ್ಕಪರಿಶೋಧನೆಗಾಗಿ ಯಾವ ಏಜೆನ್ಸಿಯನ್ನು ನೇಮಿಸಿಕೊಳ್ಳಲಾಗಿದೆ; ಇವರ ಜೊತೆ ಮಾಡಿಕೊಂಡಿರುವ ಒಡಂಬಡಿಕೆಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಲೆಕ್ಕಪರಿಶೋಧನೆಗಾಗಿ ಖರ್ಚು ಮಾಡಿರುವ ಹಣ ವ್ಯರ್ಥವಾಗಿದೆ ಎಂದು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ವರದಿ ನೀಡಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವರದಿಯ ಪ್ರಮುಖ ಅಂಶಗಳೇನು; (ವರದಿಯ ಪ್ರತಿ ಒದಗಿಸುವುದು)

(ಈ) ನಿಗದಿತ ಮಾರ್ಗಸೂಚಿಯಂತೆ ಏಜೆನ್ಸಿಗಳು ಲೆಕ್ಕಪರಿಶೋಧನೆ ನಡೆಸದಿರುವ ಬಗ್ಗೆ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ವರದಿಯ ಆಧಾರದ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಏಜೆನ್ಸಿ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

## ವಸತಿ ಹಂಚಿಕೆ ಮಾಡಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೫೫ (೩೯೯) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಎಲ್ಲಾ ಕ್ಷೇತ್ರಗಳಿಗೆ ರಾಜೀವ್ ಗಾಂಧಿ ವಸತಿ ಯೋಜನೆಯಡಿ ಮಂಜೂರು ಮಾಡಿರುವ ಮನೆಗಳೆಷ್ಟು; (ಕ್ಷೇತ್ರವಾರು ವಿವರ ನೀಡುವುದು)

(ಆ) ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು; ಸದರಿ ವಿಧಿ–ವಿಧಾನಗಳಿಗೆ ಬದಲಾವಣೆ ಮಾಡಲಾಗಿದೆಯೇ;

(ಇ) ಕಳೆದ ೩ ವರ್ಷಗಳಲ್ಲಿ ಹೆಚ್ಚುವರಿಯಾಗಿ ಯಾವ ಯಾವ ಕ್ಷೇತ್ರದಲ್ಲಿ ವಿವಿಧ ಯೋಜನೆಗಳಲ್ಲಿ ಮನೆ ನೀಡಲಾಗಿದೆ;

(ಈ) ಬಡವರ್ಗ, ಸಾಮಾನ್ಯ ವರ್ಗದವರು ಮನೆ ಹೆಚ್ಚುವರಿಯಾಗಿ ಪಡೆಯಲು ಇರುವ ಮಾನದಂಡಗಳೇನು?

## ರಾಯಚೂರು, ಮಾನ್ವಿ ತಾಲ್ಲೂಕುಗಳಲ್ಲಿ ಶುದ್ಧ ಕುಡಿಯುವ ನೀರಿನ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೫೬ (೩೪೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಕುಡಿಯುವ ನೀರಿಗಾಗಿ Multi Purpose Water Supply ಯೋಜನೆಗಳ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಮಾನ್ವಿ ತಾಲ್ಲೂಕು ಕುಡಿಯುವ ನೀರಿನ ಯೋಜನೆಗಳಾಗಿರುವ ಕಲ್ಲೂರು, ಕುರ್ಡಿ, ಮಲ್ಲಟ, ಪೋತ್ನಾಳ ಹಾಗೂ ಹುಡಾ ಗ್ರಾಮಗಳಲ್ಲಿ ಕುಡಿಯುವ ನೀರಿನ ಯೋಜನೆಗಳ ಪ್ರಸ್ತಾವನೆಗಳನ್ನು ಕಾಲಮಿತಿಯೊಳಗೆ ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಯೋಜನೆಗಳನ್ನು ನಿಗದಿತ ಸಮಯದಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯಲ್ಲಿ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು; ಎಷ್ಟು ಘಟಕಗಳಿಂದ ಕುಡಿಯುವ ನೀರು ಸರಬರಾಜಾಗುತ್ತದೆ; (ವಿವರ ನೀಡುವುದು)

(ಈ) ರಾಯಚೂರು ಜಿಲ್ಲೆಯ ದೇವದುರ್ಗ, ಲಿಂಗಸೂರು, ಮಾನ್ವಿ ಹಾಗೂ ರಾಯಚೂರು ತಾಲ್ಲೂಕುಗಳಲ್ಲಿ ಬಹು ಗ್ರಾಮ ಶಾಶ್ವತ ಶುದ್ಧ ಕುಡಿಯುವ ನೀರಿನ ಯೋಜನೆಗಳನ್ನು ನಿರ್ಮಿಸಲು ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ; ಇದ್ದಲ್ಲಿ, ಶಾಶ್ವತ ಶುದ್ಧ ಕುಡಿಯುವ ನೀರು ಯೋಜನೆ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಸರ್ಕಾರವು ಕೈಬರಹ ಖಾತಾ ಮತ್ತು ೧೧ಬಿ ಖಾತಾ ಆಸ್ತಿಗಳು ಅಸಿಂಧು ಎಂಬ ಸರ್ಕಾರದ ಆದೇಶದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭ (೩೮೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಬರಹದ ಖಾತಾ ಮತ್ತು ೧೧ಬಿ ಖಾತಾ ಆಸ್ತಿಗಳು ಅಸಿಂಧು ಎಂದು ಸರ್ಕಾರವು ಆದೇಶ ಮಾಡಿದ್ದು, ಗ್ರಾಮ ಪಂಚಾಯಿತಿ ಅಧಿಕಾರಿಗಳು ಮಾಡಿರುವ ತಪ್ಪಿನಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸಾವಿರಾರು ಕೈಬರಹದ ಖಾತಾ ಮಾಡಿಸಿಕೊಂಡಿರುವವರು ಹಣ ಸುರಿದು ಆಸ್ತಿ ಖರೀದಿಸಿರುವ ಆಸ್ತಿದಾರರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುವುದು;

(ಇ) ಈಗಾಗಲೇ ಎಷ್ಟು ಪ್ರಮಾಣದ ಆಸ್ತಿಯು ಇ-ಖಾತಾ ಆಗಿ ಪರಿವರ್ತನೆಯಾಗಿದೆ; ಇನ್ನೂ ಎಷ್ಟು ಪ್ರಮಾಣದ ಆಸ್ತಿ ಈ ಪ್ರಕ್ರಿಯೆಯಲ್ಲಿ ಪರಿವರ್ತನೆಯಾಗಬೇಕಾಗಿದೆ; ಸಾರ್ವಜನಿಕರಿಗೆ ಇದರ ಬಗ್ಗೆ ಸೂಕ್ತ ಮಾಹಿತಿ ನೀಡಲಾಗಿದೆಯೇ;

(ಈ) ಕೈಬರಹದ ಖಾತಾ ಹೊಂದಿರುವವರು ಇ-ಖಾತಾಗೆ ಪರಿವರ್ತನೆ ಮಾಡಿಸಿಕೊಳ್ಳಲು ಅನುಸರಿಸಬೇಕಾದ ಮಾನದಂಡಗಳೇನು; (ವಿವರ ನೀಡುವುದು)

(ಉ) ಈ ಅಕ್ರಮದಲ್ಲಿ ಭಾಗಿಯಾದ ಎಷ್ಟು ಜನ ಅಧಿಕಾರಿಗಳನ್ನು ಗುರುತಿಸಲಾಗಿದೆ; ಅವರ ವಿರುದ್ಧ ಏನು ಶಿಸ್ತು ಕ್ರಮ ಕೈಗೊಳ್ಳಲಾಗಿದೆ? (ಹೆಸರುಗಳೊಂದಿಗೆ ವಿವರ ನೀಡುವುದು)

## ಕಳೆದ ಮೂರು ವರ್ಷಗಳಲ್ಲಿ ಕೈಗಾರಿಕಾ ಪ್ರದೇಶ ಹಂಚಿಕೆ ಮತ್ತು ಅಭಿವೃದ್ಧಿ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೮ (೩೭೬) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡುವಂತೆ ಕೋರಿದ ಕಂಪನಿಗಳಾವುವು;

(ಆ) ಕೈಗಾರಿಕಾ ಉದ್ದೇಶಕ್ಕಾಗಿ ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನಪಡಿಸಿ ಕೊಳ್ಳಲಾಗಿದೆ; (ವಿವರವನ್ನು ಒದಗಿಸುವುದು)

(ಇ) ಸ್ವಾಧೀನಪಡಿಸಿಕೊಂಡ ಭೂಮಿಗೆ ಸರ್ಕಾರ ನಿಗಧಿಪಡಿಸಿದ ಮಾನದಂಡ, ದರ ನಿಗದಿ, ಹಂಚಿಕೆ ಮತ್ತು ಕ್ರಮಗಳೇನು; (ವಿವರ ನೀಡುವುದು)

(ಈ) ಹಂಚಿಕೆ ಪಡೆದ ಕಂಪನಿಗಳು ಕಾರ್ಯಾರಂಭ ಮಾಡಿರುತ್ತವೆಯೇ; ಮಾಡಿದ್ದಲ್ಲಿ, ಸ್ಥಳೀಯ ಕೆಲಸಗಾರರನ್ನು ನೇಮಿಸಿಕೊಳ್ಳಲಾಗಿದೆಯೇ; ಇಲ್ಲದಿದ್ದಲ್ಲಿ, ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಕ್ರಮ ಕೈಗೊಂಡಿರುವುದೇ? (ವಿವರ ನೀಡುವುದು)

## ಹೆಚ್ಚುವರಿ ಶಿಕ್ಷಕರನ್ನು ಗುರುತಿಸುವ ಮಾನದಂಡಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೫೯ (೪೫೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರನ್ನು ಗುರುತಿಸಲು ಸರ್ಕಾರ ನಿಗದಿಪಡಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ಡೈಸ್–ಮಾಹಿತಿಗೂ ಮತ್ತು ಶಾಲೆಯ ಮಕ್ಕಳ ವಾಸ್ತವ ಲೆಕ್ಕಕ್ಕೂ ವ್ಯತ್ಯಾಸವಿರುವುದು ನಿಜವೇ;

(ಇ) ಇದರಿಂದ ಹೆಚ್ಚುವರಿ ಶಿಕ್ಷಕರನ್ನು ಗುರುತಿಸಲು ತೊಂದರೆ ಆಗಿರುವುದು ನಿಜವೇ;

(ಈ) ಈ ಸಮಸ್ಯೆಯನ್ನು ಸರ್ಕಾರ ಯಾವ ರೀತಿ ಬಗೆಹರಿಸಿ, ಶಿಕ್ಷಕರಿಗೆ ನ್ಯಾಯ ಒದಗಿಸಲಾಗುವುದು?

## ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯ್ತಿಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೦ (೩೬೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯ್ತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಗ್ರಾಮ ಪಂಚಾಯ್ತಿಗಳಿಗೆ ಸ್ವಂತ ಕಟ್ಟಡ ನಿರ್ಮಿಸುವ ಕಾಮಗಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; (ಮಾಹಿತಿ ಒದಗಿಸುವುದು)

(ಇ) ೨೦೧೬–೧೭ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಹೊಸ ಗ್ರಾಮ ಪಂಚಾಯ್ತಿಗಳ ಕಟ್ಟಡ ನಿರ್ಮಾಣ ಕಾಮಗಾರಿಗೆ ೨೦೧೬–೧೭ನೇ ಸಾಲಿನಲ್ಲಿ ಮೀಸಲಿಟ್ಟ ಅನುದಾನ ಎಷ್ಟು; ಇದರಲ್ಲಿ ಬಿಡುಗಡೆ ಆಗಿರುವ ಅನುದಾನ ಎಷ್ಟು? (ಮಾಹಿತಿ ಒದಗಿಸುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 985 – 1500 ಪ್ರತಿಗಳು (ಪಿ1)